ಶ್ರೀ ಯು. ಭೂಪತಿ.— ತಾವು ಸ್ವಲ್ಪ ದಯವಹಾತಿ ಕೇಳಿ. ತಾವ್ಯಾಕೆ ಆ ರೀತಿ ಮಾಡಂತ್ತೀರಿ? ಆಗ ಆ ವಿಚಾರವನ್ನು ಪ್ರಸ್ತಾಪ ಮಾಡಿದಾಗ ಮಾನ್ಯ ಮುಖ್ಯಮಂತ್ರಿಗಳು ಇದರ ಸಲುವಾಗಿ ಕರ್ನಾಟಕವನ್ನೇ ಬಂದ್ ಮಾಡುತ್ತೇವೆಂಬ ಬಹಿರಂಗ ಆಶ್ವಾಸನೆಯನ್ನು ಕೊಟ್ಟಿದ್ದರು ಆದು ಏನಾಯಿತು ಎಂಬುದಾಗಿ ಕೇಳುತ್ತೇನೆ.

ಶ್ರೀ ಜೆ. ಎಚ್. ಪಟೇಲ್.— ಈ ಬಗ್ಗೆ ಬಂದ್ ಮಾಡುವ ಅವಶ್ಯಕತೆ ಇಲ್ಲ. ಬಂದ್ ಮಾಡಿ ವುದರಿಂದ ಇದು ಆಗುವ ಕೆಲಸವು ಅಲ್ಲ. ವಿದ್ಯುತ್ ಬಗ್ಗೆ ಮಾನ್ಯ ಸದಸ್ಯರು ಏನು ಕೇಳಿದ್ದಾರೆ, ಆ ಮಾತನ್ನು ಸರ್ಕಾರ ಈಗಲೂ ಪುನರುಚ್ಚಿಸುತ್ತದೆ. ಅವರು ಯಾವಾಗಲೇ ಆದರೂ ಈ ಕಾರ್ಖಾನೆ ಯನ್ನು ಪ್ರಾರಂಭ ಮಾಡುತ್ತೇವೆಂದರೆ, ಅದಕ್ಕೆ ಬೇಕಾಗುವ ವಿದ್ಯುತ್ತನ್ನು ಪೂರೈಕೆ ಮಾಡುತ್ತೇವೆಂಬ ಆಶ್ವಾಸನೆಯನ್ನು ಕೊಡುತ್ತೇನೆ.

ಶ್ರೀ ಬಿ. ಎಂ. ಆಡ್ಕಂತಾಯ.— ಕುದುರೆಮುಖ ಕಾರ್ಖಾನೆಗೆ ವಿದ್ಯುತ್ತನ್ನು ಪೂರೈಸುವ ಬಗ್ಗೆ ತಾವು ಏನು ಆಶ್ವಾಸನೆಯನ್ನು ಕೊಟ್ಟಿದ್ದಿರಲ್ಲ, ಆದರಲ್ಲಿ ಏನು ಮಾಡಿದ್ದೀರಿ ಎಂಬುದನ್ನು ಹೇಳಂತ್ತೀರಾ

ಶ್ರೀ ಜೆ. ಹೆಚ್. ಪಟೇಲ್.— ಈ ತರಹದ ಪ್ರಶ್ನೆಯನ್ನು ಕೇಳುವುದಕ್ಕೆ ತಾವು ಆಲೋ ಮಾಡಬಾರದು.

ಅಸಿಸ್ಟೆಂಟ್ ಪಬ್ಲಿಕ್ ಪ್ರಾಸಿಕ್ಯೂಟರ್ಸ್‌ಗಳ ಆಯ್ಕೆ ಆಗಿದ್ದರೂ ನೇಮಕ ಮಾಡದೆ ಇರಲು ಕಾರಣವೇನು

೧೩೧೩. ಶ್ರೀ ಬಿ. ಜಿ. ಕೊಟ್ರಪ್ಪ (ಹರಿಹರ).— ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಸಹಾಯಕ ಸರ್ಕಾರಿ ಅಭಿಯೋಜಕರುಗಳನ್ನು ಆಯ್ಕೆಯಾಗಿದ್ದರೂ ಕೆಲಸಕ್ಕೆ ಹಾಜರಾಗಲು ಆದೇಶ ನೀಡದೆ ಇರಲು ಕಾರಣವೇನು ಹಾಗೂ ಯಾವಾಗ ಇವರಿಗೆ ಕೆಲಸಕ್ಕೆ ಹಾಜರಾಗಲು ಆದೇಶ ನೀಡಲಾಗುವುದು

ಶ್ರೀ. ಎ. ಲಕ್ಷ್ಮೀಸಾಗರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು).—

ಅ) ಈಗಾಗಲೇ ದಿನಾಂಕ ೨೦-೨-೧೯೮೬ ರಂದು ನೇಮಕ ಹಾಗೂ ತೈನಾತಿ ಆದೇಶಗಳನ್ನು ಹೊರಡಿಸಲಾಗಿದೆ.

ಶ್ರೀ ಬಿ. ಜಿ. ಕೊಟ್ರಪ್ಪ.— ಅದಕ್ಕಾಗಿ ಮಾನ್ಯ ಮಂತ್ರಿಗಳನ್ನು ಅಭಿನಂದಿಸುತ್ತೇನೆ.

ರಾಜ್ಯದಲ್ಲಿ ರಾಜ್ಯ ರಸ್ತೆ ಸಾರಿಗೆ ಬಸ್ ನಿಲ್ದಾಣಗಳಲ್ಲಿ ಸರಿಯಾದ ವ್ಯವಸ್ಥೆ ಇಲ್ಲದಿರುವುದು

೧೪೯೯. ಶ್ರೀ ಎಂ. ಶಿವಣ್ಣ (ಹೆಗ್ಗಡದೇವನಕೋಟೆ) — ಮಾನ್ಯ ಸಾರಿಗೆ ಮತ್ತು ವಸತಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಜ್ಯದಲ್ಲಿನ ರಸ್ತೆ ಸಾರಿಗೆ ಸಂಸ್ಥೆಯ ಬಸ್ ನಿಲ್ದಾಣಗಳ ಕಟ್ಟಡದಿಂದ ಬರುವ ಆದಾಯ ಎಷ್ಟು ?

ಆ) ಬಹುತೇಕ ಬಸ್ ನಿಲ್ದಾಣಗಳಲ್ಲಿ ಶೌಚಗೃಹಗಳು ಕುಡಿಯುವ ನೀರಿನ ವ್ಯವಸ್ಥೆ ಸರಿಯಾಗಿ ಇಲ್ಲದಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ.

ಇ) ಬಂದಿದ್ದಲ್ಲಿ ಆ ಬಗ್ಗೆ ಕೈಗೊಂಡಿರುವ ಕ್ರಮಗಳೇನು ?

ಈ) ಮೈಸೂರು ನಗರದ ಬಸ್ ನಿಲ್ದಾಣದ ಕಟ್ಟಡ ಬಿರುಕು ಬಿಟ್ಟಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೆ ?

ಉ) ಬಂದಿದ್ದಲ್ಲಿ ಆ ಬಗ್ಗೆ ಸರ್ಕಾರದವರು ಕೈಗೊಳ್ಳಲಿರುವ ಕ್ರಮವೇನು ?

ಊ) ಈ ನಿಲ್ದಾಣದಲ್ಲಿ ಪದೇ ಪದೇ ದುರಸ್ತಿ ಕೆಲಸ ಮಾಡಂತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ

ಋ) ಈ ಕೆಲಸವನ್ನು ಯಾವಾಗ ಪೂರ್ಣಗೊಳಿಸಲಾಗುವುದು ?